ಅನುಬಂಧ – 9

ಕುಡುಬಿ ಜನಾಂಗವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವುದು

1289 (826) ಶ್ರೀ ಅಭಯಚಂದ್ರ ಜೈನ್.ಕೆ (ಮೂಡಬಿದ್ರೆ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ತಾಲ್ಲೂಕಿನಲ್ಲಿರುವ ಕುಡುಬಿ ಜನಾಂಗವು ಪರಿಶಿಷ್ಟ ಪಂಗಡಕ್ಕೆ ಸೇರಿದ್ದು, ಸರ್ಕಾರ ಅದನ್ನು ರದ್ದುಗೊಳಿಸಿ ಹಿಂದುಳಿದ ವರ್ಗಕ್ಕೆ ಸೇರಿಸಿರುವುದರಿಂದ ಪುನಃ ಅವರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಬೇಕೆಂದು ಒತ್ತಾಯ ಮಾಡಿ ಹಲವಾರು ವರ್ಷಗಳಿಂದ ಧರಣಿ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ವಿಷಯದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲ್ಲೂಕಿನಲ್ಲಿನ ಕುಡುಬಿ ಜನಾಂಗವು ಈ ಹಿಂದೆಯೂ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿರಲಿಲ್ಲ. ನಂತರ ಸದರಿ ಜನಾಂಗವನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಪ್ರಸ್ತಾವನೆ ಬಂದಿದೆ.

ಆ) ಉಲ್ಲೇಖಿತ ಸಮುದಾಯದ ಕುಲಶಾಸ್ತ್ರೀಯ ಅಧ್ಯಯನ ನಡೆಸುವ ಸಲುವಾಗಿ ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಇವರಿಗೆ ಸರ್ಕಾರದ ಆದೇಶ ಸಂಖ್ಯೆ:ಸಕಇ 113 ಎಸ್ಎಡಿ 2007 ದಿನಾಂಕ: 03–03–2009ರಲ್ಲಿ ಕಾರ್ಯದೇಶ ನೀಡಲಾಗಿದ್ದು, ಅವರಿಂದ ವರದಿ ನಿರೀಕ್ಷಿಸಲಾಗಿದೆ.

ವೈದ್ಯರುಗಳ ನೇಮಕಾತಿ

827 (405) ಶ್ರೀ ಅಮರೇಗೌಡ ಲಿಂಗನಗೌಡ ಬಯ್ಯಾಪುರ (ಕುಷ್ಟಗಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಆಯುರ್ವೇದ ಪದ್ಧತಿಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಪ್ರತಿಯೊ ಒಂದು ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ

ಆಯುಷ್ ವೈದ್ಯರನ್ನು ಗುತ್ತಿಗೆ ಆಧಾರದ ಮೂಲಕ ತುಂಬಲು ಸರ್ಕಾರವು ಕ್ರಮವನ್ನು ತೆಗೆದುಕೊಂಡಿದೆಯೇ;

ಆ) ಅತ್ಯಾವಶ್ಯವಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಗುತ್ತಿಗೆ ಆಧಾರದ ಮೂಲಕ ಆಯುಷ್ ವೈದ್ಯರನ್ನು ತುಂಬಿಕೊಳ್ಳಲು ಈ ಹಿಂದೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಅಧಿಕಾರವನ್ನು ನೀಡಲಾಗಿತ್ತು. ಆ ನಿಯಮ ಹಾಲಿ ಚಾಲ್ತಿಯಲ್ಲಿದೆಯೇ;

ಇ) ಸದ್ಯದಲ್ಲಿ ವೈದ್ಯರನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ರಾಜ್ಯದಲ್ಲಿ 2193 ಪ್ರಾಥಮಿಕ ಆರೋಗ್ಯ ಕೇಂದ್ರಗಳಿದ್ದು ಇವುಗಳಲ್ಲಿ ಎಂ.ಬಿ.ಬಿ.ಎಸ್. ಅರ್ಹತೆ ಹೊಂದಿದ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ನೇಮಿಸಲು ವೃಂದ ಮತ್ತು ನೇಮಕಾತಿ ನಿಮಯಗಳಲ್ಲಿ ಅವಕಾಶ ಕಲ್ಪಿಸಲಾಗಿದೆ. ಸದರಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಕೊರತೆಯನ್ನು ನೀಗಿಸುವ ಸಲುವಾಗಿ, ಸರ್ಕಾರವು 246 ಆಯುಷ್ ವೈದ್ಯರನ್ನು ಗುತ್ತಿಗೆ ಆಧಾರದ ಮೇಲೆ ಈ ಹಿಂದೆ ನೇಮಕಾತಿ ಮಾಡಿದೆ.

ಈಗ ನಿಯತಕಾಲಿಕವಾಗಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕ್ರಮ ಕೈಗೊಂಡಿದೆ. ಪ್ರಸ್ತುತ ಆಯುಷ್ ವೈದ್ಯರನ್ನು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಆ) ಮತ್ತು ಇ) ರಾಜ್ಯ ಸರ್ಕಾರದ ವತಿಯಿಂದ ಪ್ರಸ್ತುತ ಗುತ್ತಿಗೆ ಆಧಾರದ ಮೇಲೆ ಆಯುಷ್ ವೈದ್ಯರನ್ನು ನೇಮಕ ಮಾಡುತ್ತಿಲ್ಲ. ಆದರೆ, ಕೇಂದ್ರ ಸರ್ಕಾರದ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಯೋಜನೆಯಡಿ ಅವಶ್ಯಕತೆಯ ಆಧಾರದ ಮೇಲೆ ಗುತ್ತಿಗೆ ಆಧಾರದ ಮೇಲೆ ಆಯುಷ್ ವೈದ್ಯರನ್ನು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ನೇಮಿಸಿಕೊಳ್ಳಲು ಅವಕಾಶ ಇದೆ.